ತೀರಿಕೊಂಡ ಮ್ಯಾಲ ಬದುಕನ್ನ ಕಟ್ಟಿಕೊಂಡಳು. ಸಾವಯವ ಕೃಷಿ ಮಾಡತಿದ್ದಳು. ಸಾವಯವ ಗೊಬ್ಬರ ಮಾರತಿದ್ದಳು. ದನ ಸಾಕಿದ್ಲು. ಒಂದು ಕಾಳಮೆಣಸಾ, ಒಂದು ಕಾಫಿಯಾ ಎಷ್ಟು ಬೆಳೆಗೋಳು! ಹತ್ತೆಕರೆ ತೋಟ ಮಾಡಿಟ್ಟು ಹೋಗ್ಯಾಳ. ವರ್ಷಾ ಹಸಿಬತ್ತದ ತೆನೀತೋರಣ ಮಾಡಿ ಕಳಸತಿದ್ಲು. ನಟ್ಟಿಗೆ ಬಂದೋರ ಹತ್ತರ ಹಾಡು ಸಂಗ್ರಹ ಮಾಡತಿದ್ದಳು. ಒಳ್ಳೇ ಅಡಿಗೆ ಮಾಡತಿದ್ದಳು. ಹಾಡತಿದ್ದಳು. ಜೀನಿಯಸ್. ಸಾಯೋ ಮುಂದ, ಮಣಿಪಾಲ್ ಆಸ್ಪತ್ರೆಯೊಳಗ 'ಈ ಸಂಜೆ ಯಾಕಾಗಿದೆ' ಹಾಡಿದಳು. ವಾರ್ಡ್ ತುಂಬ ಅಡ್ಯಾಡಿ, 'ಕಿಮೊಥೆರಪಿಯಿಂದ ಏನಾಗದಿಲ್ಲ, ಟೆಕ್ನಾಲಜಿ ಮುಂದುವರೆದದ. ಯಾರೂ ಹೆದರಬ್ಯಾಡಿ, ಭಾಳಂದ್ರ ಕೂದಲು ಉದುರತಾವ' ಅಂತ ರೋಗಿಗಳಿಗೆ ಹೇಳತಿದ್ದಳು. ಒಳ್ಳೇ ಅನುಭಾವಿ. ನಾವು ಕೂಡಿ ಇಂಗಳೇಶ್ವರದಲ್ಲಿ ಬಸವಣ್ಣನವರ ಮನೀಗೆ, ಮತ್ತ ಕುಪ್ಪಳಿಯೊಳಗ ಕುವೆಂಪು ಮನೀಗೆ ಹೋಗಿದ್ವಿ. ಎರಡೂ ಕಡೆ ಲಿಟರಲಿ ಐ ಟ್ರಾನ್ಸಡ್. ಕುಪಳ್ಳಿಯೊಳಗ ಅಕ್ಕ 'ಬಾಗಿಲೊಳು ಕೈಮುಗಿದು ಒಳಗೆ ಬಾ ಯಾತ್ರಿಕನೆ' ಹಾಡಿದಳು. ಅಕಸ್ಮಾತ್ ತೇಜಸ್ವಿಯವರು ಒಳಗ ಬಂದಬಿಟ್ಟರು. ಹಾಡ ಕೇಳಿ ಸಂತೋಷಪಟ್ಟರು. 'ನೀವು ಪ್ರೊಫೆಶನಲ್ ಸಿಂಗರ್ರಾ?' ಅಂತ ಕೇಳಿದರು. 'ಯಾವ ಮೋಹನ ಮುರುಳಿ ಕರೆಯಿತೊ' ಹಾಡಿದಾಗ ಓಪನ್ ಫಂಕ್ಷನದೊಳಗ ಅಡಿಗರು ತಬ್ಕೊಂಡು ಅತ್ತಬಿಟ್ಟಿದ್ದರು, ಜೀವಮಾನದೊಳಗ ಹೀಂಗ ಇದನ್ನ ಹಾಡಿದೋರನ್ನೇ ನೋಡಿಲ್ಲ ಅಂತ.


ರಹಮತ್ ತರೀಕೆರೆ,
ಕಸ್ತೂರಿ ಬಾಯರಿ

◆ ನಿಮಗೆ ಪ್ರಿಯ ಲೇಖಕರು ಯಾರು?

ಮಂಟೋ ಕತೆಗಳು ಇಷ್ಟ. ಬದುಕಿನ ಕನ್ನಡಿಯನ್ನೇ ನಿಮ್ಮ ಮುಂದೆ ಹಿಡದಬಿಡ್ತಾನ. ಅಂವ ಇಂಡಿಯಾದ ಬೋದಿಲೇರ್. ಕಮ್ಯೂ, ಸಾರ್ತ್ರ ಬಹಳ ಇಷ್ಟ. ಸಾರ್ತ್ರನ 'ಬೀಯಿಂಗ್ ಅಂಡ್ ನತಿಂಗನೆಸ್' ಪಿಯುಸಿ ಇರೋವಾಗಲೇ ಓದಿದ್ದೆ. 'ಮಲೆಗಳಲ್ಲಿ ಮದುಮಗಳು' ಫಿಫ್ತ್ ಕ್ಲಾಸಿಗೆ ಓದಿದ್ದೆ. ಬೋದಿಲೇರ್ ಯಾಕಿಷ್ಟ ಅಂದರ, ಅವನು ತನ್ನ ಕಾಲಘಟ್ಟದಲ್ಲಿ ಕಂಡ ಎಲ್ಲ ನೋವುಗಳನ್ನು ಹೇಳೋಕೆ ಒಂದು ರಿದಂ ಹುಡ್ಕೊಂಡಿದ್ದಾನ. ನರಳಾಟದಲ್ಲೂ ಒಂದು ಸ್ಪಾರ್ಕ್ ಕಾಣ್ತಾನ. ಈ ಜೀವನದ ಈ ಮರಣದ ಆಚೆಯ ಬೆಳಕಿದೆಯಲ್ಲಾ, ಅದೇ ಕಾವ್ಯ ಅಂತಾನ. ನನಗ ಕಾಫ್ಕಾನ 'ಮೆಟಮಾರ್ಫಸಿಸ್' ಇಷ್ಟ. ಅದರ ನಾಯಕ ಒಂದಿನ ಹುಳಾ ಆಗಿಬಿಡ್ತಾನ. ಒಂದೊಂದು ಸಲ ಇವನೌನ ಹುಳಾ ಆಗಿ, ನಮಗ ಹ್ಯುಮಿಲೇಟ್ ಮಾಡಿದ ಎಲ್ಲಾರನೂ ಕಟಕಟ ಕಚ್ಚಬೇಕು ಅನಿಸ್ತಿತ್ತು. (ರೋಹಿಣಿ, 'ನೀನು ಹಂಗ ಕಚ್ಚಕೆ ಹೋದಾಗ ಯಾವನಾದರೂ ತುಳದು ಪಚಕ್ ಅನಿಸಿದ್ದರೆ ಏನು ಮಾಡ್ತಿ?' ಎಂದು ಛೇಡಿಸಿದರು). ಶೇಕ್ಸ್‌ಪಿಯರ್ ಓದಿದೆ. ಅವನಲ್ಲಿ ಇರಿಯೋದು ಕೊಲ್ಲೋದು ಇಷ್ಟ ಆಗಲಿಲ್ಲ. ಜಗತ್ತಿನೊಳಗೆ ಯುದ್ಧ ಆಗಬಾರದು. ಜನ ಸಾಯಬಾರದು. ನಾವು ಪ್ರಾಚೀನ ಯುದ್ಧಕಾವ್ಯಗಳ ನಾಯಕರನೆಲ್ಲ ದೇವರು ಮಾಡಿ ಇಟ್ಟಬಿಟ್ಟಿವಿ ಸುಡುಗಾಡು. ಆರತಿ ಎತ್ತೋದೇ ಎತ್ತೋದು.

◆ ಯುದ್ಧದ ಬಗ್ಗೆ ಯಾಕಷ್ಟು ತಳಮಳಸ್ತೀರಿ?